All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

18.06.2025 2.30 P.M.

**********

**ಮುಖ್ಯಾಂಶಗಳು**

- ರಾಜ್ಯದಲ್ಲಿ ೬೦ ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಗುರಿ - ಮುಖ್ಯಮಂತ್ರಿ ಸಿದ್ಧರಾಮಯ್ಯ
- ಕೊಪ್ಪಳ ಜಿಲ್ಲೆಯಲ್ಲಿ ನಾಲ್ಕು ಬಾಲ್ಯವಿವಾಹ ಪ್ರಕರಣ ಪತ್ತೆ ; ಅಧಿಕಾರಿಗಳ ವಿರುದ್ಧ ಸಚಿವ ಶಿವರಾಜ್ ತಂಗಡಗಿ ಅಸಮಾಧಾನ
- ಮೆಟ್ರೋ ನಿಲ್ದಾಣಗಳಲ್ಲಿ ೮ ನಂದಿನಿ ಮಳಿಗೆ ತೆರೆಯಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ
- ಚಿಕ್ಕಬಳ್ಳಾಪುರದ ನಂದಿಬೆಟ್ಟದಲ್ಲಿ ನಡೆಯಬೇಕಿದ್ದ ಸಂಪುಟ ಸಭೆಯ ವಿಧಾನ ಸೌಧದಲ್ಲಿ ನಡೆಸಲು ತೀರ್ಮಾನ
- ಹೆದ್ದಾರಿ ಟೋಲ್‌ಗಳಲ್ಲಿ ಫಾಸ್-ಟ್ಯಾಗ್ ಆಧಾರಿತ ವಾರ್ಷಿಕ ಪಾಸ್ ವಿತರಿಸಲು ಕೇಂದ್ರ ಸರ್ಕಾರ ನಿರ್ಧಾರ

><><><><><><><><

ವಿದ್ಯುತ್ ಉತ್ಪಾದನೆಯಲ್ಲಿ ದೇಶದಲ್ಲಿ ರಾಜ್ಯದ ಕೊಡುಗೆ ಅಪಾರ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಕರ್ನಾಟಕ ವಿದ್ಯುತ್ ಪ್ರಸರಣ ನೌಕರರ ನಿಗಮ ವಜ್ರಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ೬೦ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ವಿದ್ಯುತ್ ಪಂಪ್ ಸೆಟ್ ಗಳಿಗೆ ೧೯ಸಾವಿರ ಕೋಟಿ ರೂಪಾಯಿ ಸಬ್ಸಿಡಿ ನೀಡಲಾಗುತ್ತಿದೆ ಎಂದು ಸ್ಪಷ್ಟ ಪಡಿಸಿದ್ದಾರೆ. ೧೯೦೨ರಲ್ಲಿ ಮೊದಲನೇ ಬಾರಿಗೆ ಕರ್ನಾಟಕದಲ್ಲಿ ವಿದ್ಯುತ್ ಉತ್ಪಾದನೆಯಾಯಿತು. ೧೯೦೫ರಲ್ಲಿ ಬೆಂಗಳೂರಿನಲ್ಲಿ ಮೊದಲಬಾರಿಗೆ ವಿದ್ಯುತ್ ಸರಬರಾಜು ಆತು ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಇಂಧನ ಸಚಿವ ಕೆ ಜೆ ಜಾರ್ಜ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

><><><><><><><><

ಕೊಪ್ಪಳ ಜಿಲ್ಲೆ ಮತ್ತು ಕನಕಗಿರಿ ವಿಧಾನಸಬಾ ಕ್ಷೇತ್ರದಲ್ಲಿ ಬಾಲ್ಯ ವಿವಾಹಗಳು ನಿರಂತರವಾಗಿ ನಡೆಯುತ್ತಿರುವ ಬಗ್ಗೆ ಹಿಂದುಳಿದ ವರ್ಗಗಳ ಅಭಿವೃದ್ಧಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಕಳವಳ ವ್ಯಕ್ತ ಪಡಿಸಿದ್ದಾರೆ. ಗಂಗಾವತಿಯಲ್ಲಿ ನಡೆದ ತ್ರೈಮಾಸಿಕ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಚಿಕ್ಕ ಮಕ್ಕಳಿಗೆ ಮದುವೆ ಮಾಡಲಾಗುತ್ತಿದ್ದು ಎಪ್ರಿಲ್ ಮತ್ತು ಮೇ ತಿಂಗಳಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ನಾಲ್ಕು ಬಾಲ್ಯವಿವಾಹ ಪ್ರಕರಣಗಳು ವರದಿಯಾಗಿವೆ ಎಂದು ಹೇಳಿದ್ದಾರೆ. ಈ ಕುರಿತಂತೆ ಕಠಿಣ ಕ್ರಮ ಕೈಗೊಳ್ಳದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು ಬಾಲ್ಯವಿವಾಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕೆಂದು ತಿಳಿಸಿದ್ದಾರೆ. ಸ್ಥಳೀಯ ರಾಜಕಾರಣಿಗಳು ಪ್ರಭಾವಿ ನಾಯಕರ ಒತ್ತಡಕ್ಕೆ ಮಣಿಯದಂತೆ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

><><><><><><><><

ಸರ್ಕಾರದ ಎಲ್ಲಾ ಕಚೇರಿಗಳಲ್ಲಿ ಕಾನೂನಾತ್ಮಕ ದಾಖಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಕಡತಗಳ ಮೇಲೆ ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎಂಬ ಟ್ಯಾಗ್‌ಲೈನ್ ಮುದ್ರಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ತಿಳಿಸಿದ್ದಾರೆ. ವಿಜಯನಗರದಲ್ಲಿ ಯೋಜನೆಗಳ ಕುರಿತ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು. ಮಕ್ಕಳ ಹಕ್ಕುಗಳ ರಕ್ಷಣೆಗೆ ಶಿಕ್ಷಣ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ ಸೇರಿದಂತೆ ಎಲ್ಲ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ. ರಾಜ್ಯದಲ್ಲಿ ಬಾಲ ನ್ಯಾಯ ಕಾಯ್ದೆಯನ್ನು ಸಮರ್ಪಕವಾಗಿ ಜಾರಿಗೊಳಿಸಲು ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ತರಬೇತಿ ನೀಡುವ ಅಗತ್ಯವಿದೆ. ಅನ್‌ಲೈನ್ ಚಟುವಟಿಕೆಗಳು ಮತ್ತು ಮಾದಕ ವಸ್ತುಗಳು ಮಕ್ಕಳಿಗೆ ಮಾರಕವಾಗಿವೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

><><><><><><><><

ಮೆಟ್ರೋ ನಿಲ್ದಾಣಗಳಲ್ಲಿ ಲ ನಂದಿನಿ ಮಳಿಗೆ ತರೆಯಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು, ಮೆಟ್ರೋ ನಿಲ್ದಾಣಗಳಲ್ಲಿ ಮಳಿಗೆ ತೆರೆಯಲು ಬಿಎಂಆರ್ ಸಿಎಲ್ ಗೆ ಅರ್ಜಿ ಹಾಕಲು ಕೆಎಂಎಫ್‌ಗೆ ಸೂಚನೆ ನೀಡಿದ್ದು, ನಂದಿನಿ ಮಳಿಗೆ ತೆರೆಯಲು ಅವಕಾಶ ನೀಡುವಂತೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದ್ದಾರೆ. ೧೦ ಕಡೆಗಳ ಪೈಕಿ ಎರಡು ಕಡೆ ಅಮೂಲ್ ಜಾಗತಿಕ ಟೆಂಡರ್ ನಲ್ಲಿ ಅರ್ಜಿ ಹಾಕಿ ಮಳಿಗೆ ತೆರೆದಿದೆ. ಈಗ ತೆರೆಯಲಾಗಿರುವ ಅಮೂಲ್ ಮಳಿಗೆ ಮುಚ್ಚಿಸುವುದು ಸರಿಯಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ**

ಇದೇ ವೇಳೆ "ಸ್ವಚ್ಛ ಬೆಂಗಳೂರು ಕಾರ್ಯಕ್ರಮದಲ್ಲಿ ಬೆಂಗಳೂರಿನಲ್ಲಿ ಕಸ ವಿಲೇವಾರಿಗೆ ಸಹಾಯವಾಣಿ ಸಂಖ್ಯೆಯನ್ನು ಬಿಡುಗಡೆ ಮಾಡಲಾಗಿದೆ. ಸಾರ್ವಜನಿಕರು ಕಸವಿರುವ ಜಾಗದ ಫೋಟೋ ತೆಗೆದು ಈ ಸಂಖ್ಯೆಗೆ ರವಾನಿಸಿದರೆ ಒಂದು ವಾರದಲ್ಲಿ ಆ ಜಾಗದಲ್ಲಿರುವ ಕಸ ವಿಲೇವಾರಿ ಮಾಡಲಾಗುವುದು ಎಂದು ಹೇಳಿದ್ದಾರೆ. ಬೆಂಗಳೂರಿನಲ್ಲಿ ರಸ್ತೆ ಕಾಮಗಾರಿಗೆ ಅನುದಾನವನ್ನು ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

><><><><><><><><

ಚಿಕ್ಕಬಳ್ಳಾಪುರದ ನಂದಿಬೆಟ್ಟದಲ್ಲಿ ನಾಳೆ ನಡೆಯಬೇಕಿದ್ದ ಮಹತ್ವದ ಸಚಿವ ಸಂಪುಟ ಸಭೆಯನ್ನು ರದ್ದುಗೊಳಿಸಿ ಬೆಂಗಳೂರಿನ ವಿಧಾನ ಸೌಧದಲ್ಲಿ ನಡೆಸಲು ತೀರ್ಮಾನಿಸಲಾಗಿದೆ. ಈ ಸಭೆಯ ಕಾರ್ಯಾಸೂಚಿಯನ್ನು ಪ್ರತ್ಯೇಕವಾಗಿ ಕಳುಹಿಸಲಾಗುವುದೆಂದು ಸಚಿವಾಲಯ ಸ್ಪಷ್ಟಪಡಿಸಿದೆ.

><><><><><><><><

ಬಸ್, ಮೆಟ್ರೋ ಇತ್ಯಾದಿಯಲ್ಲಿ ಇರುವಂತೆ ಹೆದ್ದಾರಿ ಟೋಲ್‌ಗಳಿಗೂ ಪಾಸ್ ವ್ಯವಸ್ಥೆ ಬರಲಿದೆ. ಫಾಸ್-ಟ್ಯಾಗ್ ಆಧಾರಿತ ವಾರ್ಷಿಕ ಪಾಸ್ ಪದ್ಧತಿಯನ್ನು ಕೇಂದ್ರ ಸರ್ಕಾರ ಜಾರಿಗೆ ತರುತ್ತಿದೆ. ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಈ ಪಾಸ್ ಸ್ಕೀಮ್ ಅನ್ನು ಘೋಷಿಸಿದ್ದಾರೆ. 'ಮೂರು ಸಾವಿರ ರೂ ಬೆಲೆಯ ಫಾಸ್-ಟ್ಯಾಗ್ ಆಧಾರಿತ ವಾರ್ಷಿಕ ಪಾಸ್ ಅನ್ನು ಪರಿಚಯಿಸುತ್ತಿದ್ದೇವೆ' ಎಂದು ನಿತಿನ್ ಗಡ್ಕರಿ ತಿಳಿಸಿದ್ದಾರೆ ಕಮರ್ಷಿಯಲ್ ವಾಹನಗಳಿಗೆ ಈ ಪಾಸ್ ಲಭ್ಯ ಇರೋದಿಲ್ಲ. ಕಮರ್ಷಿಯಲ್ ಅಲ್ಲದ ಕಾರ್, ಜೀಪ್, ವ್ಯಾನ್ ಇತ್ಯಾದಿ ಖಾಸಗಿ ವಾಹನಗಳಿಗೆ ಮಾತ್ರ ಇದು ಸಿಗಲಿದೆ. ೨೦೨೫ರ ಆಗಸ್ಟ್ ೧೫ರಿಂದ ಈ ಫಾಸ್-ಟ್ಯಾಗ್ ಪಾಸ್ ವಿತರಣೆ ನಡೆಯಲಿದೆ. ಒಂದು ಪಾಸ್ ಬೆಲೆ ೩ ಸಾವಿರ ರೂಪಾಯಿ ಇರಲಿದೆ. ಪಾಸ್ ಆಯಕ್ಟಿವೇಟ್ ಆಗಿ ಒಂದು ವರ್ಷದವರೆಗೆ ಇರಲಿದ್ದು ೨೦೦ ಟ್ರಿಪ್ ಮಿತಿ ಇರಲಿದೆ.

><><><><><><><><

ರಾಜ್ಯ ಸರ್ಕಾರ ಈಗ ಸ್ಮಾರ್ಟ್ ಮೀಟರ್ ಹೆಸರಲ್ಲಿ ದರೋಡೆಗೆ ಹೊರಟಿದೆ ಎಂದು ಬಿಜೆಪಿ ಆರೋಪಿಸಿದೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ಇಂಧನ ಇಲಾಖೆಯಲ್ಲಿ ಸ್ಮಾರ್ಟ್ ಮೀಟರ್ ಖರೀದಿ ಮತ್ತು ಅಳವಡಿಕೆಯಲ್ಲಿ ೧೫ ಸಾವಿರದ ೫೬೮ ಕೋಟಿ ರೂ.ಗಳ ಹಗರಣ ನಡೆಸಿದೆ ಎಂದು ದೂರಿದೆ. ಆರ್ಥಿಕವಾಗಿ ದಿವಾಳಿಯಾಗಿರುವ ಕಾಂಗ್ರೆಸ್ ಸರ್ಕಾರ ಈಗ ಜನರನ್ನು ಸುಲಿಗೆ ಮಾಡಲು ಸ್ಮಾರ್ಟ್ ಮೀಟರ್ ಅಳವಡಿಸುವುದನ್ನು ಕಡ್ಡಾಯಗೊಳಿಸಿ ಶೇಕಡ

೪೦೦-೮೦೦ರಷ್ಟು ದರ ಏರಿಕೆ ಮಾಡಿ ಜನರನ್ನು ಬಲಿ ಪಶುಮಾಡಲಾಗುತ್ತಿದೆ ಎಂದು ಆರೋಪಿಸಿದೆ.

><><><><><><><><><

ರಾಜ್ಯದ ಕರಾವಳಿ ಜಿಲ್ಲೆಗಳು ಸೇರಿದಂತೆ ಹಲವೆಡೆ ಅಬ್ಬರಿಸಿದ್ದ ಮಳೆ ಇಂದು ಇಳಿಮುಖವಾಗಿದೆ. ಕರಾವಳಿ ಕರ್ನಾಟಕದಲ್ಲಿ ಹಳದಿ ಅಲರ್ಟ್ ಘೋಷಿಸಲಾಗಿದೆ. ಕೊಡಗು ಜಿಲ್ಲೆಯಲ್ಲಿ ಇಂದು ಮಳೆಯ ಅಬ್ಬರ ಕಡಿಮೆಯಾಗಿದೆ. ಎರಡು ದಿನಗಳಿಂದ ರಜೆ ನೀಡಲ್ಪಟ್ಟಿದ್ದ ಶಿಕ್ಷಣ ಸಂಸ್ಥೆಗಳು ಇಂದು ಪುನರಾರಂಭಗೊಂಡಿದೆ. ಮೂರು ದಿನಗಳಿಂದ ಸುರಿದ ಭಾರೀ ಮಳೆಯಿಂದಾಗಿ ಕಾವೇರಿ, ಲಕ್ಷ್ಮಣತೀರ್ಥ ನದಿಗಳು ತುಂಬಿ ಹರಿಯುತ್ತಿದ್ದು  ನದಿಪಾತ್ರದ  ಹೊಲಗದ್ದೆಗಳು ಜಲಾವೃತಗೊಂಡಿವೆ. ಹಾರಂಗಿ ಜಲಾನಯನ ವ್ಯಾಪ್ತಿಯಲ್ಲಿ ಉತ್ತಮ ಮಳೆಯಾಗಿರುವುದರಿಂದಾಗಿ ಹಾರಂಗಿ ಜಲಾಶಯಕ್ಕೆ ನೀರಿನ ಹರಿವು ಹೆಚ್ಚಳವಾಗಿದ್ದು, ೭ ಸಾವಿರದ ೮೮೮ ಕ್ಯೂಸೆಕ್ ಒಳಹರಿವಿದೆ. ಜಲಾಶಯದಿಂದ ನದಿಗೆ ೧೨ ಸಾವಿರದ ೧೬೬ ಕ್ಯೂಸೆಕ್ ನೀರನ್ನು ಹೊರಬಿಡಲಾಗಿದೆ. ೨ ಸಾವಿರದ ೮೫೯ ಅಡಿ ಗರಿಷ್ಟ ಸಂಗ್ರಹಣಾ ಸಾಮರ್ಥ್ಯದ ಜಲಾಶಯದಲ್ಲಿಂದು ೨ ಸಾವಿರದ ೮೫೦ ಅಡಿ ನೀರಿನ ಸಂಗ್ರಹವಿದೆ.

><><><><><><><><><

ಮಾಜಿ ಶಾಸಕ ಕಾಕಾಸಾಹೇಬ್ ಪಾಟೀಲ್ ಬೆಳಗಾವಿಯ ಕೆ.ಎಲ್.ಇ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಅವರಿಗೆ ೭೦ ವರ್ಷ ವಯಸ್ಸಾಗಿತ್ತು. ಪತ್ನಿ ಇಬ್ಬರು ಮಕ್ಕಳನ್ನು ಅವರು ಅಗಲಿದ್ದಾರೆ. ಕಾಕಾಸಾಹೇಬ್ ಪಾಟೀಲ್ ೧೯೯೯ ರಿಂದ ೨೦೧೩ ರ ವರೆಗೂ ಸತತ  ಮೂರು ಬಾರಿ ನಿಪ್ಪಾಣಿ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದಿಂದ ಶಾಸಕರಾಗಿ ಆಯ್ಕೆ ಯಾಗಿದ್ದರು. ಇಂದು ನಿಪ್ಪಾಣಿಯಲ್ಲಿ ಅಂತ್ಯಸಂಸ್ಕಾರ ನಡೆಯಲಿದೆ. ಕಾಕಾಸಾಹೇಬ್ ಪಾಟೀಲ್ ನಿಧನಕ್ಕೆ ಮುಖ್ಯಮಂತ್ರಿ , ಉಪಮುಖ್ಯಮಂತ್ರಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

><><><><><><><><><

ಪಡಿತರ ಚೀಟಿ ಹೊಂದಿರುವ ಕುಟುಂಬ ಸದಸ್ಯರ ಇ-ಕೆವೈಸಿಯನ್ನು ೨೦೨೫ ರ ಜೂನ್ ೩೦ ರೊಳಗಾಗಿ  ಪೂರ್ಣಗೊಳಿಸಬೇಕೆಂದು ಗದಗ ಜಿಲ್ಲಾ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಜಂಟಿ ನಿರ್ದೇಶಕರು ನ್ಯಾಯ ಬೆಲೆ ಅಂಗಡಿಗಳ ಮಾಲಿಕರಿಗೆ ಸೂಚನೆ ನೀಡಿದ್ದಾರೆ. ಇ-ಕೆವೈಸಿ ಮಾಡಲು ಬಾಕಿ ಉಳಿದಿರುವ ಪಡಿತರ ಚೀಟಿಯಲ್ಲಿನ ಸದಸ್ಯರು ಊರಲ್ಲಿ ಇಲ್ಲದೆ ಇದ್ದ ಪಕ್ಷದಲ್ಲಿ ಪಡಿತರ ಚೀಟಿಯ ಸಂಖ್ಯೆ, ಆಧಾರ್ ಕಾರ್ಡ್ ದೊಂದಿಗೆ ರಾಜ್ಯದ ಯಾವುದೇ ಜಿಲ್ಲೆ

ತಾಲೂಕು ಗ್ರಾಮದಲ್ಲಿರುವ ನ್ಯಾಯಬೆಲೆ ಅಂಗಡಿಯಲ್ಲಿ ಇ ಕೆವೈಸಿ ಮಾಡಿಕೊಳ್ಳಸಿ ಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

><><><><><><><><><

ರಷ್ಯಾದ ವಿಭಾಗದಲ್ಲಿ ಇತ್ತೀಚೆಗೆ ನಡೆದ ದುರಸ್ತಿಗಳ ನಂತರ ಕಕ್ಷೆಯ ಪ್ರಯೋಗಾಲಯದಲ್ಲಿನ ಕಾರ್ಯಾಚರಣೆಗಳನ್ನು ಮೌಲ್ಯಮಾಪನ ಮಾಡಲು ನಾಸಾಗೆ ಅವಕಾಶ ನೀಡುವ ಸಲುವಾಗಿ, ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದ ಆಕ್ಸಿಯಮ್ -೪ ಮಿಷನ್ ಅನ್ನು ಈ ತಿಂಗಳ ೧೧ ಕ್ಕೆ ಮುಂದೂಡಲಾಗಿದೆ. ಇದನ್ನು ಆಕ್ಸಿಯಮ್ ಸ್ಪೇಸ್ ಪ್ರಕಟಿಸಿದೆ.

><><><><><><><><><